ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 25–9–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | <u>ವಿಶ್ವ ಹಿರಿಯ ನಾಗರಿಕರ ದಿನಾಚರಣೆ - 2014:</u><br><br>ಹಿರಿಯ ನಾಗರಿಕರಿಗಾಗಿ ಆಯೋಜಿಸಿರುವ ರಾಜ್ಯದ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳ ಉದ್ಘಾಟನಾ ಸಮಾರಂಭ.<br><br><u>ಉದ್ಘಾಟನೆ:</u><br><br>ಶ್ರೀಮತಿ ಉಮಾಶ್ರೀ,<br>ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು.<br><br><u>ಅಧ್ಯಕ್ಷತೆ:</u><br><br>ಶ್ರೀ ಜಿ. ಜಯರಾಂ<br>ಮಾಜಿ ನಿರ್ದೇಶಕರು,<br>ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,<br>ಬೆಂಗಳೂರು.<br><br><u>ಮುಖ್ಯ ಅತಿಥಿ:</u><br><br>ಶ್ರೀ ರಾಧಾ ಎಸ್. ಮೂರ್ತಿ,<br>ವ್ಯವಸ್ಥಾಪಕ ಟ್ರಸ್ಟಿ<br>ನೈಟಿಂಗೇಲ್ ಮೆಡಿಕಲ್ ಟ್ರಸ್ಟ್,<br>ಆರ್. ಟಿ. ನಗರ, ಬೆಂಗಳೂರು. | 26–09–2014<br>ಶುಕ್ರವಾರ<br>ಬೆಳಿಗ್ಗೆ<br>9–30 ಗಂಟೆಗೆ | ಕರ್ನಾಟಕ ಸಚಿವಾಲಯ ಕ್ಲಬ್,<br>ಕಬ್ಬನ್‌ಪಾರ್ಕ್,<br>ಬೆಂಗಳೂರು |

| | | | |
|---|---|---|---|
| 2. | 2013-14 ನೇ ಸಾಲಿನ ಕೆ.ಎಸ್.ಕ್ಯು.ಎ.ಎ.ಸಿ.ಯ ಅಂಗೀಕರಣಕ್ಕೆ ಸಂಬಂಧಿಸಿದಂತೆ ಆಯುಕ್ತರಿಂದ ಪತ್ರಿಕಾಗೋಷ್ಠಿ: | 26-09-2014 ಶುಕ್ರವಾರ ಬೆಳಿಗ್ಗೆ 11-00 ಗಂಟೆಗೆ | ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ, ಸಭಾಂಗಣ, ಎರಡನೇ ಮಹಡಿ, 6 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು - 560 003 |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ಶಿಕ್ಷಣ ಅದಾಲತ್ : ಅಹವಾಲು ಸಲ್ಲಿಸಲು ಅವಕಾಶ

ಬೆಂಗಳೂರು, ಸೆಪ್ಟೆಂಬರ್ 25, (ಕರ್ನಾಟಕ ವಾರ್ತೆ)

2013-14 ಸಾಲಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಉತ್ತರ ಜಿಲ್ಲಾ ವ್ಯಾಪ್ತಿಗೆ ಸಂಬಂಧಿಸಿದಂತೆ ಶಿಕ್ಷಣ ಕ್ಷೇತ್ರದಲ್ಲಿ ಬಾಕಿ ಇರುವ ಕಡತ/ಪತ್ರಗಳನ್ನು ವಿಲೇವಾರಿಗಾಗಿ ದಿನಾಂಕ: 27-9-2014 ರಂದು ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 2-00 ಗಂಟೆವರೆಗೆ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಆಯುಕ್ತರ ಅಧ್ಯಕ್ಷತೆಯಲ್ಲಿ ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು ಇಲ್ಲಿ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು, ನೌಕರರು ಶಿಕ್ಷಕರು ಮತ್ತು ಖಾಸಗಿ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯುವರು ಅಹವಾಲುಗಳನ್ನು ಸಲ್ಲಿಸಿ ತಮ್ಮ ಸಮಸ್ಯೆಗಳಿಗೆ ಪರಿಹಾರವನ್ನು ಪಡೆದುಕೊಳ್ಳಬಹುದಾಗಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಪ್ರಕಟಣೆ ತಿಳಿಸಿದೆ.

ಬಿಜಿಪಿ:ಜಿಪಿಆರ್.

## ಬೆಂಗಳೂರು - ಮಂಗಳೂರಿಗೆ
## ಟಿ.ಎಸ್.ಆರ್. ಸುಬ್ರಮಣ್ಯಯನ್ ಉನ್ನತ ಸಮಿತಿ ಭೇಟಿ

ಬೆಂಗಳೂರು, ಸೆಪ್ಟೆಂಬರ್ 25, (ಕರ್ನಾಟಕ ವಾರ್ತೆ)

ಭಾರತ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯವು ಶ್ರೀ ಟಿ.ಎಸ್.ಆರ್. ಸುಬ್ರಮಣ್ಯಯನ್ ಅವರ ಅಧ್ಯಕ್ಷತೆಯಲ್ಲಿ ರಚಿಸಿರುವ ಉನ್ನತ ಮಟ್ಟದ ಸಮಿತಿಯು ಪರಿಸರ ಸಂರಕ್ಷಣಾ ಕಾಯ್ದೆ 1986, ಅರಣ್ಯ ಸಂರಕ್ಷಣಾ ಕಾಯ್ದೆ 1980, ವನ್ಯಜೀವಿ ಸಂರಕ್ಷಣಾ ಕಾಯ್ದೆ 1972, ಜಲಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ ಕಾಯ್ದೆ 1974 ಹಾಗೂ ವಾಯುಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ ಕಾಯ್ದೆ 1981 ಕ್ಕೆ ಸಂಬಂಧಿಸಿದಂತೆ ನಾಗರೀಕ ಸಂಸ್ಥೆಗಳು, ಸರ್ಕಾರೇತರ ಸಂಸ್ಥೆಗಳು ಮತ್ತು ವ್ಯಕ್ತಿಗಳು

ಸೇರಿದಂತೆ ಎಲ್ಲಾ ಪಾಲುದಾರರ ಅನಿಸಿಕೆ ಅಭಿಪ್ರಾಯ ಮತ್ತು ಸಲಹೆಗಳನ್ನು ಪಡೆಯುವ ಸಲುವಾಗಿ ಬೆಂಗಳೂರು ಹಾಗೂ ಮಂಗಳೂರು ನಗರಕ್ಕೆ ಭೇಟಿ ನೀಡಲಿದೆ.

ಸೆಪ್ಟೆಂಬರ್ 27 ರಂದು ಕೊಠಡಿ ಸಂಖ್ಯೆ 419, ನಾಲ್ಕನೇ ಮಹಡಿ, ವಿಕಾಸಸೌಧ ಬೆಂಗಳೂರು ಇಲ್ಲಿ ಮಧ್ಯಾಹ್ನ 12.00 ರಿಂದ 1.30 ಗಂಟೆವರೆಗೆ ಹಾಗೂ ಸೆಪ್ಟೆಂಬರ್ 28 ರಂದು ಸಮ್ಮೇಳನ ಸಭಾಂಗಣ, ಜಿಲ್ಲಾಧಿಕಾರಿಗಳ ಕಚೇರಿ ಇಲ್ಲಿ ಬೆಳಿಗ್ಗೆ 11.00 ರಿಂದ 1.30 ಗಂಟೆವರೆಗೆ ಈ ಸಮಿತಿಯು ಮನವಿಯನ್ನು ಸ್ವೀಕರಿಸುವುದು.

ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳು ಈ ಅವಕಾಶವನ್ನು ಉಪಯೋಗಿಸಿಕೊಂಡು ಮೇಲ್ಕಂಡ ಶಾಸನಗಳ ಬಗ್ಗೆ ತಮ್ಮ ಅನಿಸಿಕೆ, ವಿಮರ್ಶೆ ಮತ್ತು ಅಭಿಪ್ರಾಯ ನೀಡುವಂತೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಅಧೀನ ಕಾರ್ಯದರ್ಶಿಗಳು ಕೋರಿದ್ದಾರೆ. ಹೆಚ್ಚಿನ ಮಾಹಿತಿಗೆ ಭಾರತ ಸರ್ಕಾರದ ಪರಿಸರ ಮತ್ತು ಅರಣ್ಯ ಮಂತ್ರಾಲಯದ ವೆಬ್‌ಸೈಟ್ http://envfor.nic.in ನ್ನು ಸಂಪರ್ಕಿಸಬಹುದಾಗಿದೆ.

## ಪಸಕ್ತ ಸಾಲಿನಲ್ಲಿ 16 ಸಾವಿರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕ

– ಕಿಮ್ಮನೆ ರತ್ನಾಕರ

ಬೆಂಗಳೂರು, ಸೆಪ್ಟೆಂಬರ್ 25, (ಕರ್ನಾಟಕ ವಾರ್ತೆ)

ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ 16 ಸಾವಿರ ಪ್ರಾಥಮಿಕ ಶಾಲಾ ಶಿಕ್ಷಕರನ್ನು ನೇಮಕ ಮಾಡಲಾಗುವುದು ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖಾ ಸಚಿವರಾದ ಶ್ರೀ ಕಿಮ್ಮನೆ ರತ್ನಾಕರ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಇಂದು ಪತ್ರಕರ್ತರನ್ನುದ್ದೇಶಿಸಿ ಮಾತನಾಡಿದ ಅವರು ಇಲಾಖೆಯಲ್ಲಿ ಸುಮಾರು 28 ಸಾವಿರ ಹುದ್ದೆಗಳು ಬಾಕಿ ಇದ್ದು ಸಧ್ಯ 16 ಸಾವಿರ ಹುದ್ದೆಗಳನ್ನು ಭರ್ತಿಮಾಡುವ ಪ್ರಕ್ರಿಯೆಯನ್ನು ಆರಂಭಿಸಲಾಗಿದೆ. ಇನ್ನು ಮುಂದೆ ಪ್ರತಿವರ್ಷ 4 ರಿಂದ 5 ಸಾವಿರ ಶಿಕ್ಷಕರನ್ನು ಭರ್ತಿಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ವಿದ್ಯಾರ್ಥಿಗಳ ಅರ್ಹತೆಯನ್ನು ಪರೀಕ್ಷಿಸುವ ದೃಷ್ಟಿಯಿಂದ 5 ಮತ್ತು 8 ನೇ ತರಗತಿಗಳಿಗೆ ಪಬ್ಲಿಕ್ ಪರೀಕ್ಷೆ ನಡೆಸಬೇಕೆಂಬುದು ನನ್ನ ಸ್ವಂತ ಅಭಿಪ್ರಾಯವಾಗಿದೆ ಎಂದ ಸಚಿವರು, ಈ ಸಂಬಂಧ ತಜ್ಞರ ಜೊತೆ ಚರ್ಚಿಸಿ ಅಂತಿ ತೀರ್ಮಾನಕೈಗೊಳ್ಳಲಾಗುವುದು. ಹೀಗೆ ನಡೆಸುವ ಪರೀಕ್ಷೆಯಲ್ಲಿ ಯಾವ ವಿದ್ಯಾರ್ಥಿಗಳನ್ನು ಅನುತ್ತೀರ್ಣಗೊಳಿಸುವುದಿಲ್ಲ ಎಂದ ಅವರು ಈ ವಿಷಯಕ್ಕೆ ಸಂಬಂಧಿಸಿದಂತೆ ತರಾತುರಿಯಲ್ಲಿ ನಿರ್ಧಾರ ಕೈಗೊಳ್ಳುವುದಿಲ್ಲ ಎಂದರು.

ಭಾಷಾ ಮಾಧ್ಯಮ ವಿಷಯಕ್ಕೆ ಸಂಬಂಧಿಸಿದಂತೆ ಈಗಾಗಲೇ 3 ರಿಂದ 4 ಸಭೆಗಳನ್ನುನಡೆಸಿ ಚರ್ಚಿಸಲಾಗಿದ್ದು, ದಸರಾ ಮುಗಿದ ನಂತರ ಸಾಹಿತಿಗಳು, ಕನ್ನಡ ಪರ ಸಂಘಗಳು ಹಾಗೂ ಕನ್ನಡ ಪರ ಹೋರಾಟಗಾರರ ಸಭೆ ಕರೆದು ಚರ್ಚಿಸಲಾಗುವುದು ಎಂದ ಶ್ರೀ ಕಿಮ್ಮನೆ ರತ್ನಾಕರ್ ಅವರು ಈ ಸಂಬಂಧ ರಾಜ್ಯದ ಮುಖ್ಯಮಂತ್ರಿ ಅವರು ಅಂತಿಮ ತೀರ್ಮಾನ ಕೈಕೊಳ್ಳಲಿದ್ದಾರೆ ಎಂದರು.

ಇನ್ನು ಮುಂದೆ ಶಿಕ್ಷಕರಾಗಿ ಆಯ್ಕೆಗೊಂಡವರು ಇಲಾಖೆ ನೇಮಕ ಮಾಡುವ ಶಾಲೆಯಲ್ಲಿ ಶಿಕ್ಷಕರು ಕಡ್ಡಾಯವಾಗಿ 3 ವರ್ಷಗಳ ಸೇವೆಯನ್ನು ಸಲ್ಲಿಸಬೇಕು. ಯಾವ ಜಿಲ್ಲೆಯಲ್ಲಿ ಶಿಕ್ಷಕರು ನೇಮಕಗೊಳ್ಳುತ್ತಾರೋ ಅದೇ ಜಿಲ್ಲೆಯಲ್ಲಿ ಕನಿಷ್ಟ 10 ವರ್ಷ ಸೇವೆ ಸಲ್ಲಿಸಬೇಕು. ರಾಜ್ಯ ಸರ್ಕಾರವು ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು (TET) ರಾಷ್ಟ್ರೀಯ ಶಿಕ್ಷಣ ನೀತಿಯಡಿಯಲ್ಲಿಯೇ ನಡೆಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಬಿಜಿಪಿ:ಜಿಪಿಆರ್